ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ರಾಜ್ಯದಲ್ಲಿರುವ ಕ್ರೀಡಾಂಗಣಗಳ ಸಂಖ್ಯೆ

ಶ್ರೀ ಸಿ. ಆರ್. ಮನೋಹರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1401 (1576) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಕ್ರೀಡಾಂಗಣಗಳ ಸಂಖ್ಯೆ ಎಷ್ಟು ; (ಜಿಲ್ಲೆಗಳವಾರು ಮಾಹಿತಿ ನೀಡುವುದು)

(ಆ) ಈ ಕ್ರೀಡಾಂಗಣಗಳನ್ನು ಅಭಿವೃದ್ಧಿಪಡಿಸಲು ಕಳೆದ 3 ವರ್ಷಗಳಲ್ಲಿ ಸರ್ಕಾರ ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ನೀಡಲಾಗಿರುವ ಅನುದಾನದ ಮೊತ್ತವೆಷ್ಟು ;

(ಈ) ಈ ಅನುದಾನದ ಪೈಕಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ;

(ಉ) ಸದರಿ ಜಿಲ್ಲೆಗಳಿಗೆ ಕ್ರೀಡಾಂಗಣವನ್ನು ಅಭಿವೃದ್ಧಿಪಡಿಸಲು ಪ್ರಸಕ್ತ ಸಾಲಿನಲ್ಲಿ ಅನುದಾನವೇನಾದರು ನಿಗದಿಪಡಿಸಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಪ್ರಮಾಣದ ಅನುದಾನವನ್ನು ನಿಗದಿಪಡಿಸಲಾಗಿದೆ ?